ದಿನಾಂಕ 16-01-2020 ರಂದು ಪುನಃ ಸಾಕ್ಷಿಗೆ ಕರೆಸಿ ಪ್ರತಿಜ್ಞಾವಿಧಿ ಬೋಧಿಸಲಾಯಿತು.

**ಪಾಟೀ ಸವಾಲುಃ 1, 2, 4, 6 ಮತ್ತು 7 ನೇ ಪ್ರತಿವಾದಿಯರ ಪರ ಶ್ರೀ ಬಿ.ಬಿ ವಕೀಲರಿಂದ.**

ಈ ದಿನ ನಾನು 8 ನೇ ಪ್ರತಿವಾದಿಯ ಜೊತೆ ನ್ಯಾಯಾಲಯಕ್ಕೆ ಬಂದಿದ್ದೇನೆ ಅವರು ನನಗೆ ಸಾಕ್ಷಿ ಹೇಳಬೇಕು ಎಂದು ಕರೆದುಕೊಂಡು ಬಂದಿದ್ದಾರೆ. ಶಹಾಬಾದನಲ್ಲಿರುವ ಆಸ್ತಿಯು 8 ನೇ ಪ್ರತಿವಾದಿಯ ತಂದೆಯ ಹೆಸರಿನಲ್ಲಿ ಇತ್ತು ಅದು 9 ಎಕರೆ ಇತ್ತು ನಾನು ಸದರಿ ಜಮೀನಿನ ಪಹಣಿ ನೋಡಿಲ್ಲ. ಶಹಾಬಾದನಲ್ಲಿರುವ ಆಸ್ತಿಯನ್ನು ಯಾರು ಯಾರಿಗೆ ಮಾರಿದ್ದಾರೆ ಎನ್ನುವುದನ್ನು ನನಗೆ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಯರ ಮನೆತನದ ಬಗ್ಗೆ ನನಗೆ ಏನೂ ಗೊತ್ತಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಆಸ್ತಿ ನಂಬರ ನನಗೆ ಗೊತ್ತಿಲ್ಲ. ದಾವಾ ಅನುಕ್ರಮಾಂಕದ 1 ರಿಂದ 5 ನೇ ದಾವಾ ಆಸ್ತಿಗಳನ್ನು ಯಾರ ಹೆಸರಿನಲ್ಲಿ ಖರೀದಿ ಮಾಡಲಾಗಿದೆ ಎನ್ನುವುದು ನನಗೆ ಗೊತ್ತಿಲ್ಲ. 1 ರಿಂದ 5 ನೇ ದಾವಾ ಆಸ್ತಿಗಳು 1, 2 ಮತ್ತು 5 ಪ್ರತಿವಾದಿಯರ ಸ್ವಂತ ಆಸ್ತಿಗಳು ಇವೆ ಎಂದರೆ ಸರಿಯಲ್ಲ. ವಾದಿ ಮತ್ತು ಎಲ್ಲಾ ಪ್ರತಿವಾದಿಯರು ಸೇರಿ 1, 2 ಮತ್ತು 5 ನೇ ಪ್ರತಿವಾದಿಯರ ಹೆಸರಿನಲ್ಲಿರುವ 1 ರಿಂದ 5 ನೇ ದಾವಾ ಆಸ್ತಿಗಳನ್ನು ಖರೀದಿ ಮಾಡಿದ್ದಾರೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಬಗ್ಗೆ ನನಗೆ ಏನೂ ಗೊತ್ತಿಲ್ಲದಿದ್ದರು ಸಹಿತ 8 ನೇ ಪ್ರತಿವಾದಿಯ ಮಾತು ಕೇಳಿಕೊಂಡು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 5 ಮತ್ತು 10 ನೇ ಪ್ರತಿವಾದಿಯರ ಪರ ಶ್ರೀ ಜೆ.ವಿ.ಹೆಚ್ ವಕೀಲರಿಂದ.**

ನನ್ನ ಮುಖ್ಯ ವಿಚಾರಣೆಯ ಶಪಥ ಪತ್ರದಲ್ಲಿ ಏನು ಬರೆಯಲಾಗಿದೆ ಎನ್ನುವುದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ದಾಖಲೆಗಳನ್ನು ನಾನು ನೋಡಿಲ್ಲ. ನನಗೆ ಏನೂ ಗೊತ್ತಿಲ್ಲದಿದ್ದರು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 8 ನೇ ಪ್ರತಿವಾದಿಯ ಪರ ಶ್ರೀ ಬಿ.ಜಿ ವಕೀಲರಿಂದ.**

8 ನೇ ಪ್ರತಿವಾದಿಯ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ಸಾಕ್ಷಿದಾರರು ಹೇಳಿದಂತೆ ನನ್ನ ಉಕ್ತ ಲೇಖನಕ್ಕೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ.ಕೇ. ಸರಿ ಇರುತ್ತದೆ**

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ